# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 976(1337)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಗೋವಿಂದರಾಜ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಉಪನ್ಯಾಸಕರ ಕೊರತೆ ನೀಗಿಸಲು ಕ್ರಮಕೈಗೊಳ್ಳುವ ಬಗ್ಗೆ

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿನ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿಷಯ ಬೋಧನೆಗೆ ನೇರ ನೇಮಕಾತಿ ಉಪನ್ಯಾಸಕರ ಕೊರತೆ ಇರುವುದು ನಿಜವೇ; (ಜಿಲ್ಲಾವಾರು, ವಿಷಯವಾರು, ಕಾಲೇಜುವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಉಪನ್ಯಾಸಕರ ಕೊರತೆ ನೀಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಕಳೆದ 3 ವರ್ಷಗಳ ಅವಧಿಯಲ್ಲಿ ಸರ್ಕಾರವು ನೇಮಕ ಮಾಡಿಕೊಂಡ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಪ್ರತಿ ವರ್ಷವೂ ಅತಿಥಿ ಉಪನ್ಯಾಸಕರ ನೇಮಕಾತಿ ಮತ್ತು ಅವರ ಸಮಸ್ಯೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ದೀರ್ಘಾವಧಿ ಯೋಜನೆಗಳು ಯಾವುವು? (ಸಂಪೂರ್ಣ ವಿವರ ಒದಗಿಸುವುದು)